# ಪರಿಸ್ಥಿತಿ ಸುಧಾರಣೆಗೆ ಕ್ರಮ

## ಇಂದಿನ ರಾಜಕೀಯದ ಬಗ್ಗೆ ಸಭಾಪತಿ ಹೊರಟ್ಟಿ ಬೇಸರ

ಹುಬ್ಬಳ್ಳಿ: ಮರ್ಯಾದೆ ಇದ್ದವರು ರಾಜಕಾರಣದಲ್ಲಿ ಇರಬಾರದು ಅನ್ನೋ ಸ್ಥಿತಿ ನಿರ್ಮಾಣವಾಗಿದೆ ಬೇಸರ ವ್ಯಕ್ತಪಡಿಸಿರುವ ವಿಧಾನಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ ಪರಿಸ್ಥಿತಿ ಸುಧಾರಣೆಗೆ ಕ್ರಮ ಕೈಗೊಳ್ಳುತ್ತೇನೆ ಎಂದಿದ್ದಾರೆ.

ಬಿಜೆಪಿಯ ಸದಸ್ಯ ಕೆ.ಪಿ.ನಂಜುಂಡಿ ಇಂದು ತಮ್ಮನ್ನು ಭೇಟಿ ಮಾಡಿ ಪರಿಷತ್ ಸದಸ್ಯತ್ವಕ್ಕೆ ರಾಜೀನಾಮೆ ನೀಡಿದ ನಂತರ ಅದನ್ನು ಅಂಗೀಕರಿಸಿ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

ನನ್ನ ಸಭಾಪತಿ ಅವಧಿಯಲ್ಲಿ 13 ಜನ ರಾಜೀನಾಮೆ ಕೊಟ್ಟಿದ್ದಾರೆ ಎಂದು ಹೇಳುವ ಮುಖಾಂತರ ರಾಜಕೀಯದಲ್ಲಿ ಎಥಿಕ್ಸ್ ಈಗ ಕಡಿಮೆಯಾಗಿದೆ. ದುಡ್ಡೊಕೊಟ್ಟು, ತೆಗೆದುಕೊಂಡು ಓಟ್ ಹಾಕುವವರೆಗೆ ಪ್ರಜಾಪ್ರಭುತ್ವಕ್ಕೆ ಬೆಲೆಯಿಲ್ಲ. ಹಿಂದೆ ಸಂಗೀತಗಾರರು, ಸಾಹಿತಿಗಳು ಪರಿಷತ್‌ನಲ್ಲಿ ಇರುತ್ತಿದ್ದರು. ಈಗ ಹಣ, ತೋಳ್ಬಲದ ರಾಜಕೀಯ ನಡೆಯುತ್ತಿದೆ. ಯಾರಿಗೋ ಆಶ್ರಯ ಕಲ್ಪಿಸಲುಮಾಡ ಬೇಕು ಎಮ್‌ಎಲ್‌ಸಿ ಮಾಡುತ್ತಾರೆ. ಸಂವಿಧಾನ ದುರುಪಯೋಗ ಆಗಬಾರದು, ಗೌರವಿಸುವ ಕೆಲಸ ಮಾಡಬೇಕು ಎಂದು ಹೇಳಿದರು.



### ಪರಿಷತ್ ಸದಸ್ಯತ್ವಕ್ಕೆ ಕೆ.ಪಿ. ನಂಜುಂಡಿ ರಾಜೀನಾಮೆ

ಹುಬ್ಬಳ್ಳಿ: ವಿಧಾನ ಪರಿಷತ್ ಸದಸ್ಯ ಕೆ ಪಿ ನಂಜುಂಡಿ ಅವರು ಇಂದು ಬೆಳಿಗ್ಗೆ ಸಭಾಪತಿ ಬಸವರಾಜ್ ಹೊರಟ್ಟಿ ಮನೆಗೆ ಆಗಮಿಸಿ ಸುಮಾರು ಹೊತ್ತು ಚರ್ಚೆ ನಡೆಸಿದರು.

ಭಾರತೀಯ ಜನತಾ ಪಕ್ಷದಿಂದ ವಿಧಾನ ಪರಿಷತ್ ಸದಸ್ಯರಾಗಿದ್ದು ತಮ್ಮ ವಿಧಾನಸಭಾ ಸದಸ್ಯತ್ವಕ್ಕೆ ರಾಜೀನಾಮೆ ನೀಡುವುದನ್ನ ಪ್ರಕಟಿಸಿ ಸಭಾಪತಿ ಬಸವರಾಜ ಹೊರಟ್ಟಿ ಅವರಿಗೆ ಪತ್ರ ನೀಡೋ ಮುಖಾಂತರ ರಾಜೀನಾಮೆ ಸಲ್ಲಿಸಿದರು. ಅವರು ನೀಡಿದ ರಾಜೀನಾಮೆ ಪತ್ರವನ್ನು ಪಡೆದು ಯಾವ ಕಾರಣಕ್ಕೆ ರಾಜೀನಾಮೆ ನೀಡುತ್ತಿದ್ದೀರಿ ಎನ್ನುವ ಕುರಿತು ಚರ್ಚಿಸಿ ದರೂ ನಂತರ ಅವರ ರಾಜೀನಾಮೆಯನ್ನ ಅಂಗೀಕರಿಸಿದ್ದಾಗಿ ಸಭಾಪತಿ ಬಸವರಾಜ ಹೊರಟ್ಟಿ ಅವರು ಪ್ರಕಟಿಸಿದರು

ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪನವರ ಬಣದಲ್ಲಿ ಗುರುತಿಸಿಕೊಂಡಿದ್ದ ಕೆ.ಪಿ. ನಂಜುಂಡಿ ಅವರು ವಿಶ್ವಕರ್ಮ ಸಮುದಾಯದ ರಾಜ್ಯ ನಾಯಕರಾಗಿದ್ದಾರೆ. ರಾಜೀನಾಮೆ ನೀಡಿದ ನಂತರ ಮಾಧ್ಯಮದವರೊಂದಿಗೆ ಮಾತನಾಡಿರುವ ನಂಜುಂಡಿ ತಾವು ನಿರ್ಲಕ್ಷ್ಯ ಸಮುದಾಯಕ್ಕೆ ಕಾಯಕ ಸಮಾಜದಿಂದ ಬಂದಿದದ್ದು, ಅದರ ಅಭಿವೃದ್ಧಿಗಾಗಿ ರಾಜಕೀಯದಲ್ಲಿ ಗುರುತಿಸಿಕೊಂಡೆ. ನನ್ನನ್ನು ಕೇವಲ ಎಂಎಲ್‌ಸಿಯಾಗಿ ಮಾಡಿದರೆ ಹೊರತು ಯಾವುದೇ ರೀತಿಯ ಜವಾಬ್ದಾರಿ ನೀಡಲಿಲ್ಲ. ಎರಡು ವರ್ಷಗಳಿಂದ ನನ್ನ ಸಮುದಾಯದವರು ರಾಜೀನಾಮೆ ನೀಡಲು ಒತ್ತಾಯಿಸುತ್ತಿದ್ದರು. ಇದೀಗ ರಾಜೀನಾಮೆ ನೀಡಿದ್ದೇನೆ. ನಾಳೆ ಬೆಳಿಗ್ಗೆ 10 ಗಂಟೆಗೆ ಕಾಂಗ್ರೆಸ್ ಪಕ್ಷ ಸೇರುತ್ತೇನೆ ಎಂದು ತಿಳಿಸಿದ್ದಾರೆ.

### ರೌಡಿ ಸೈಯದ್ ಮಾರ್ಝುರ್ ಸೆರೆ

ಬೆಂಗಳೂರು: ನಾಲ್ಕು ವರ್ಷಗಳಿಂದ ತಲೆಮರಿಸಿಕೊಂಡಿದ್ದ, ರೌಡಿ ಅಬ್ಬಿಗೆರೆಯ ನಿವಾಸಿಯಾದ ಸೈಯದ್ ಮಾರ್ಝುರ್ 31 ವರ್ಷ ಎಂಬುವನನ್ನು ಶಿವಾಜಿನಗರ ಪೊಲೀಸರು ಬಂಧಿಸಿರುತ್ತಾರೆ.

ಶಿವಾಜಿನಗರದ ಸುಲ್ತಾನ್ಜಿ ಗುಂಟ ರಸ್ತೆಯಲ್ಲಿರುವ ಕಾಳಿಯಮ್ಮ ದೇವಸ್ಥಾನದ ಬಳಿ ಸಾರ್ವಜನಿಕರಿಂದ ಮತ್ತು ವ್ಯಾಪಾರಸ್ಥರಿಂದ ಮಾರಕಾಸ್ತ್ರ ಹಿಡಿದು ಹಫ್ತಾ ವಸೂಲಿ ಮಾಡುವ ಸಮಯದಲ್ಲಿ ಶಿವಾಜಿನಗರ ಪೊಲೀಸರು ಬಂಧಿಸಿರುತ್ತಾರೆ.

→P2